# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

17

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE :

# ರಾಮಾ ಜೋಯಿಸ್ ಇನ್ನಿಲ್ಲ

## ವಯೋಸಹಜ ಕಾಯಿಲೆಯಿಂದ ನಿಧನ । ಗಣ್ಯರ ಕಂಬನಿ

ಬೆಂಗಳೂರು: ಮಾಜಿ ರಾಜ್ಯಪಾಲ ಹಾಗೂ ನಿವೃತ್ತ ನ್ಯಾಯಮೂರ್ತಿ ರಾಮಾ ಜೋಯಿಸ್ ಮಂಗಳವಾರ ನಿಧನ ಹೊಂದಿದ್ದಾರೆ. ಅವರಿಗೆ 89 ವರ್ಷ ವಯಸ್ಸಾಗಿತ್ತು. ರಾಜಾಜಿನಗರದ ತಮ್ಮ ನಿವಾಸದಲ್ಲಿ ವಯೋಸಹಜ ಕಾಯಿಲೆಯಿಂದ ನಿಧನ ಹೊಂದಿದ್ದಾರೆ.



ಚಾಮರಾಜಪೇಟೆಯ ಚಿತಾಗಾರದಲ್ಲಿ ಅವರ ಅಂತ್ಯಸಂಸ್ಕಾರವನ್ನು ಸರ್ಕಾರಿ ಗೌರವದೊಂದಿಗೆ ನೆರವೇರಿಸಲಾಗಿದೆ. ಅಂತ್ಯಸಂಸ್ಕಾರದಲ್ಲಿ ರಾಜ್ಯ ಸರ್ಕಾರದ ಪರವಾಗಿ ಶಿಕ್ಷಣ ಸಚಿವ ಸುರೇಶ್ ಕುಮಾರ್ ಪಾಲ್ಗೊಂಡಿದ್ದರು. ಗೃಹ ಸಚಿವ ಬಸವರಾಜ್ ಬೊಮ್ಮಾಯಿ, ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ ಸೇರಿದಂತೆ ಅನೇಕ ಗಣ್ಯರು ರಾಮಾ ಜೋಯಿಸ್ ಅವರ ಅಂತಿಮ ದರ್ಶನ ಪಡೆದರು.

ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸೇರಿದಂತೆ ಅನೇಕ ಗಣ್ಯರು ರಾಮಾ ಜೋಯಿಸರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

ಜೋಯಿಸರು 1931ರ ಜುಲೈ 27ರಂದು ಶಿವಮೊಗ್ಗ ಜಿಲ್ಲೆಯ ಅರಗ ಗ್ರಾಮದಲ್ಲಿ ನರಸಿಂಹ ಜೋಯಿಸ್ ಮತ್ತು ಲಕ್ಷ್ಮೀದೇವಮ್ಮ ಅವರ ಪುತ್ರರಾಗಿ ಜನಿಸಿದ್ದರು. ಬಾಲ್ಯದ ಶಿಕ್ಷಣವನ್ನು ಅಲ್ಲಿಯೇ ಪೂರೈಸಿದ ಅವರು, ಮುಂಬೈ ಲಾ ಕಾಲೇಜಿನಲ್ಲಿ ವಕೀಲಿಕೆ ಕೋರ್ಸ್ ನಂತರ ಮೈಸೂರು ವಿವಿಯಲ್ಲಿ ವಕೀಲಿಕೆ ವೃತ್ತಿಯ ಉನ್ನತ ವ್ಯಾಸಂಗ ಮಾಡಿದ್ದರು.

ಜನಸಂಘದ ಮೂಲಕ ರಾಜಕೀಯದಲ್ಲಿಯೂ ಗುರುತಿಸಿಕೊಂಡಿದ್ದ ಅವರು, ರಾಷ್ಟ್ರೀಯ ಸ್ವಯಂ ಸೇವಕ ಸಂಘದಲ್ಲಿಯೂ ಸಕ್ರಿಯರಾಗಿದ್ದರು. 1975ರಲ್ಲಿ ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಅಟಲ್ ಬಿಹಾರಿ ವಾಜಪೇಯಿ ಹಾಗೂ ಲಾಲ್ ಕೃಷ್ಣ ಅಡ್ವಾಣಿ ಜೊತೆ ಜೈಲುವಾಸ ಅನುಭವಿಸಿದ್ದರು.

ಸುಪ್ರೀಂ ಕೋರ್ಟ್ ವಕೀಲರಾಗಿ, ಪಂಜಾಬ್ ಹಾಗೂ ಹರಿಯಾಣ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿದ್ದರು. ಬಿಹಾರ ಮತ್ತು ಜಾರ್ಖಂಡ್ ರಾಜ್ಯಗಳ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದರು.

ಇವರು ಕಾನೂನಿನ ಬಗ್ಗೆ ಅನೇಕ ಪುಸ್ತಕಗಳನ್ನು ಬರೆದಿದ್ದಾರೆ. ಲೀಗಲ್ ಆ್ಯಂಡ್ ಕಾನ್‌ಸ್ಟಿಟ್ಯೂಷನ್ ಆಫ್ ಇಂಡಿಯಾ, ಹಿಸ್ಟಾರಿಕ್ ಲೀಗಲ್ ಬ್ಯಾಟಲ್, ಧರ್ಮ ದಿ ಗ್ಲೋಬಲ್ ಎಥಿಕ್ ಅವರ ಪ್ರಮುಖ ಕೃತಿಗಳು.

ಸೇವಾ ಮನೋಭಾವದ ಸಾಕಾರ ಮೂರ್ತಿ